**All India Radio: Bangalore**
**Regional Bulletin In Kannada**
**12.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.08.2025 / 6.40 p.m.**
**<><><><>**

ಮುಖ್ಯಾಂಶಗಳು

1. ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಪ್ರಕರಣ; ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಒತ್ತಾಯ: ಸದನ ಸಮಿತಿ ರಚಿಸಲು ಆಗ್ರಹ
2. ಆನ್‌ಲೈನ್ ಗೇಮ್ ವಿರುದ್ಧ ಸಮಿತಿ ವರದಿ ಸಲ್ಲಿಕೆ ನಂತರ ಕ್ರಮ - ಗೃಹ ಸಚಿವ ಪರಮೇಶ್ವರ್
3. ರಾಜ್ಯದ ವಿವಿಧೆಡೆ ಹರ್ ಘರ್ ತಿರಂಗಾ ಸಂಭ್ರಮದ ಅಭಿಯಾನಕ್ಕೆ ಚಾಲನೆ
4. ಕೇಂದ್ರ ಸರ್ಕಾರದ ಬುಡಕಟ್ಟು ಯೋಜನೆಗೆ ಉತ್ತರ ಕನ್ನಡ ಜಿಲ್ಲೆಯ ೩೧ ಗ್ರಾಮಗಳು ಆಯ್ಕೆ

<><><><>

ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಪ್ರಕರಣದಲ್ಲಿ ರಾಜ್ಯ ಸರ್ಕಾರದ ವೈಪಲ್ಯ ಸ್ಪಷ್ಟವಾಗಿ ಕಾಣುತ್ತಿದ್ದು, ಮುಖ್ಯಮಂತ್ರಿಗಳು ರಾಜೀನಾಮೆ ನೀಡಬೇಕು ಎಂದು ವಿಧಾನಸಭೆಯಲ್ಲಿಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ಒತ್ತಾಯಿಸಿದ್ದಾರೆ. ಸಾರ್ವಜನಿಕ ಮಹತ್ವದ ವಿಚಾರ ನಿಯಮ ೬೯ರಡಿ ವಿಷಯ ಪ್ರಸ್ತಾಪಿಸಿದ ಅವರು, ಈ ಘಟನೆಯಲ್ಲಿ ೧೧ ಜನರು ಅಮಾಯಕರು ಪ್ರಾಣ ಕಳೆದುಕೊಂಡಿದ್ದಾರೆ. ಹಲವಾರು ಮಂದಿ ಗಾಯಗೊಂಡಿದ್ದಾರೆ. ಸರ್ಕಾರ ತಪ್ಪು ಮಾಡಿರುವುದು ಸ್ಪಷ್ಟವಾಗಿ ಕಾಣುತ್ತದೆ. ಸಾರ್ವಜನಿಕರ ಸುರಕ್ಷತೆ ಅಗತ್ಯವಿರುವ ಕ್ರಮಗಳನ್ನು ಕೈಗೊಂಡಿರಲಿಲ್ಲ. ಎಲ್ಲಾ ಹಂತಗಳಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವರ ಕಾರ್ಯ ವೈಫಲ್ಯ ಸ್ಪಷ್ಟವಾಗಿ ಗೋಚರವಾಗುತ್ತದೆ. ಘಟನೆಯ ಹೊಣೆಗಾರಿಕೆ ಹೊತ್ತು ಈ ಮೂವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಘಟನೆ ಬಗ್ಗೆ ಸದನ ಸಮಿತಿ ರಚಿಸಬೇಕು, ಸಿಬಿಐ ತನಿಖೆ ನಡೆಸಬೇಕು ಹಾಗೂ ಸೂಕ್ತವಾದ ನಿಯಮಗಳನ್ನು ರೂಪಿಸಬೇಕು ಎಂದು ಹೇಳಿದರು.

<><><><>

ರಾಜ್ಯದಲ್ಲಿ ಆನ್‌ಲೈನ್ ಗೇಮ್‌ಗಳ ವಿರುದ್ಧ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ವರದಿ ನೀಡಲು ರಚಿಸಲಾದ ಸಮಿತಿ ಸೆಪ್ಟೆಂಬರ್‌ನಲ್ಲಿ ವರದಿ ನೀಡಲಿದ್ದು, ನಂತರ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ. ಆನ್‌ಲೈನ್ ಗೇಮ್ ಕುರಿತಂತೆ ಬಿಜೆಪಿಯ ಸುರೇಶ್ ಕುಮಾರ್, ಪ್ರಶ್ನೋತ್ತರ ವೇಳೆಯಲ್ಲಿ ಮಾಡಿದ ಪ್ರಸ್ತಾಪಕ್ಕೆ ಉತ್ತರಿಸಿದ ಗೃಹ ಸಚಿವ ಡಾ. ಪರಮೇಶ್ವರ್, ಮಾದಕವ್ಯಸನಕ್ಕಿಂತಲೂ ಹೆಚ್ಚಾಗಿ ಆನ್‌ಲೈನ್ ಗೇಮ್‌ಗಳು ಯುವಕರ ಭವಿಷ್ಯವನ್ನು ಹಾಳು ಮಾಡುತ್ತಿವೆ. ಆನ್‌ಲೈನ್ ಗೇಮ್‌ಗಳ ವಿರುದ್ಧ ತೆಗೆದುಕೊಳ್ಳಬೇಕಾದ ವರದಿ ನೀಡಲು ಹಿರಿಯ ಪೊಲೀಸ್ ಅಧಿಕಾರಿ ಪ್ರಣಬ್ ಮೊಹಂತಿ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಕಳೆದ ಮೂರು ವರ್ಷದಲ್ಲಿ ಆನ್‌ಲೈನ್ ಗೇಮಿಂಗ್‌ಗೆ ಸಂಬಂಧಿಸಿದಂತೆ ೩೪೭ ಪ್ರಕರಣಗಳು ದಾಖಲಾಗಿವೆ. ಈ ವರ್ಷ ಜುಲೈ ವೇಳೆಗೆ ೧೫೬ ಪ್ರಕರಣ ದಾಖಲಿಸಲಾಗಿದೆ ಎಂದು ವಿವರಿಸಿದರು. ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮಧ್ಯ ಪ್ರವೇಶಿಸಿ ಮಾತನಾಡಿ, ಫ್ಯಾಂಟಸಿ ಕ್ರೀಡೆಯನ್ನು ಕೌಶಲ್ಯ ಎಂದು ಪರಿಗಣಿಸಲಾಗಿದೆ. ಸರ್ವರ್‌ಗಳು ಚೀನಾ ಹಾಗು ಇತರ ವಿದೇಶಿ ನಿಯಂತ್ರಿತವಾಗಿದ್ದು, ಮೋಸ ನಡೆದರೂ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂದು ಹೇಳಿದರು.

<><><><>

ಬೆಂಗಳೂರಿನಲ್ಲಿ ಮಳೆಯಿಂದಾಗಿ ಉಂಟಾದ ಅನಾಹುತಗಳಿಂದ ೧೦ ಮಂದಿ ಜೀವಹಾನಿಯಾಗಿದೆ. ಒಂದು ಸಾವಿರದ ೯೧೪ ಮನೆಗಳು ಹಾಗೂ ೩ ಸಾವಿರದ ೪೩ ಕಿಲೋಮೀಟರ್ ಉದ್ದದ ರಸ್ತೆಗಳು ಹಾನಿಗೊಳಗಾಗಿವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸಭೆಗಿಂದು ತಿಳಿಸಿದ್ದಾರೆ. ಮಳೆ ಅನಾಹುತಗಳ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಲಾಗಿದ್ದು, ಹಂತ ಹಂತವಾಗಿ ಕಾಮಗಾರಿ ಕೈಗೊಂಡಿದ್ದು, ಸರಿಪಡಿಸುವುದಾಗಿ ಅವರು ವಿಧಾನಸಭೆಯಲ್ಲಿಂದು ಭರವಸೆ ನೀಡಿದರು.

<><><>

ಸಚಿವ ಸಂಪುಟದಿಂದ ಕೆ.ಎನ್. ರಾಜಣ್ಣ ಅವರ ನಿರ್ಗಮನ ಕುರಿತು ಸಚಿವ ಎಚ್.ಕೆ. ಪಾಟೀಲ್ ಮುಖ್ಯಮಂತ್ರಿ ಪರವಾಗಿ ವಿಧಾನಸಭೆಯಲ್ಲಿ ಹೇಳಿಕೆ ನೀಡಿ, ಸಚಿವರ ರಾಜೀನಾಮೆ ಅಥವಾ ವಜಾ ಪ್ರಕರಣಗಳು ವಿಧಾನಸಭೆಯಲ್ಲಿ ಚರ್ಚೆಯಾಗಿಲ್ಲ, ನಿಯಮಾವಳಿಗಳಲ್ಲೂ ಅವಕಾಶವಿಲ್ಲ ಒಂದು ವೇಳೆ ರಾಜೀನಾಮೆ ನೀಡಿದವರು ಮಾತನಾಡಲು ಬಯಸಿದರೆ ಸಭಾಧ್ಯಕ್ಷರು ಅನುಮತಿ ನೀಡಬಹುದಾಗಿದೆ. ಅದರ ಹೊರತಾಗಿ ಚರ್ಚೆಗಳು ಅನಗತ್ಯ ಎಂದು ಹೇಳಿದರು. ಇದಕ್ಕೂ ಮುನ್ನ ವಿರೋಧ ಪಕ್ಷಗಳ ಶಾಸಕರು ಸದನದಲ್ಲಿ ಇರುವ ಮುಖ್ಯಮಂತ್ರಿಗಳೇಖು ಉತ್ತರ ನೀಡಬೇಕೆಂದು ಪಟ್ಟು ಹಿಡಿದರು.

<><><>

ವಿಧಾನಪರಿಷತ್‌ನಲ್ಲಿಯೂ ಪ್ರತಿಪಕ್ಷಗಳ ಶಾಸಕರು ರಾಜಣ್ಣ ವಜಾ ವಿಚಾರದ ಬಗ್ಗೆ ಚರ್ಚೆಗೆ ಅವಕಾಶ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಲು ಕಾರಣಗಳೇನು ಎಂಬುದನ್ನು ತಿಳಿಸುವಂತೆ ಆಗ್ರಹಪಡಿಸಿದರು. ಒಂದು ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆದು, ಉಂಟಾದ ಗೊಂದಲದ ವಾತಾವರಣದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಸದನವನ್ನು ಕೆಲಕಾಲ ಮುಂದೂಡಿದರು.

<><><>

ಧರ್ಮಸ್ಥಳದಲ್ಲಿ ಅನಾಮಿಕನ ದೂರು ಆಧರಿಸಿ ಎಸ್‌ಐಟಿ ತನಿಖೆ ನಡೆಯುತ್ತಿರುವ ಬಗ್ಗೆ ಕಾರ್ಕಳ ಕ್ಷೇತ್ರದ ಸದಸ್ಯ ಸುನೀಲ್ ಕುಮಾರ್ ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದರು. ಧಾರ್ಮಿಕ ನಂಬಿಕೆ ಹಾಗೂ ಶ್ರದ್ಧಾ ಕೇಂದ್ರಗಳ ಮೇಲೆ ದಾಳಿ ನಡೆಯುತ್ತಿದೆ. ಈವರೆಗಿನ ತನಿಖೆ ಮಾಹಿತಿಯನ್ನು ಸದನಕ್ಕೆ ತಿಳಿಸಬೇಕೆಂದು ಬಿಜೆಪಿ ಸದಸ್ಯರು ಒತ್ತಾಯಿಸಿದರು. ಗೃಹ ಸಚಿವ ಪರಮೇಶ್ವರ್, ಸ್ಥಳೀಯ ಜನರ ಒತ್ತಾಯ ಹಾಗೂ ಸರ್ಕಾರಕ್ಕೆ ಬಂದ ದೂರು ಆಧರಿಸಿ, ಎಸ್‌ಐಟಿ ತನಿಖೆ ನಡೆಸಲಾಗುತ್ತಿದೆ. ತನಿಖೆಗೆ ಕಾಲಮಿತಿ ನಿಗದಿಯಾಗಿದೆ. ತನಿಖೆ ಪೂರ್ಣಗೊಂಡು, ವರದಿ ಬಂದ ನಂತರ ಮಾಹಿತಿ ನೀಡಲಾಗುವುದು. ಅಲ್ಲಿಯವರೆಗೆ ಚರ್ಚೆ ಮಾಡುವುದು ಸೂಕ್ತ ಅಲ್ಲ ಎಂದು ಹೇಳಿದರು.

<><><>

ಮಾಹಿತಿ ಹಕ್ಕು ಕಾಯ್ದೆ ದುರುಪಯೋಗವಾಗುತ್ತಿದ್ದು, ಅದನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದು ವಿಧಾನಸಭೆಯಲ್ಲಿಂದು ಶಾಸಕರು ಪಕ್ಷಾತೀತವಾಗಿ ಒತ್ತಾಯಿಸಿದರು. ಮಹಂತೇಶ್ ಕೌಜಲಗಿ ಅವರ ಪ್ರಶ್ನೆಗೆ ಮುಖ್ಯಮಂತ್ರಿಗಳ ಪರವಾಗಿ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ್ ಉತ್ತರ ನೀಡಿ, ಆಡಳಿತ ವ್ಯವಸ್ಥೆಯ ಪಾರದರ್ಶಕತೆಗೆ ಮಾಹಿತಿ ಹಕ್ಕು ಕಾಯ್ದೆ ಕ್ರಾಂತಿಕಾರಕ ಬದಲಾವಣೆ ತಂದಿದೆ. ದುರುಪಯೋಗ ತಡೆಗಟ್ಟಲು ಅಗತ್ಯ ನಿಯಮಾವಳಿ ರೂಪಿಸಲು ರಾಜ್ಯ ಸರ್ಕಾರಗಳಿಗೆ ಅವಕಾಶವಿದೆ. ಶಾಸಕರು ಸಲಹೆ ನೀಡಿದರೆ ಅದನ್ನು ಆಧರಿಸಿ ಕ್ರಮ ಜರುಗಿಸಲಾಗುವುದು. ಪದೇ ಪದೇ ಮಾಹಿತಿ ಕೇಳಿ ಕಾಯ್ದೆ ದುರುಪಯೋಗ ಪಡಿಸಿಕೊಂಡ ೨೮ ಮಂದಿಯನ್ನು ಈಗಾಗಲೇ ಕಪ್ಪು ಪಟ್ಟಿಗೆ ಸೇರಿಸಲಾಗಿದೆ ಎಂದರು.

<><><>

ಕೊಪ್ಪಳ ಜಿಲ್ಲೆಯ ಕುಕನೂರು ತಾಲ್ಲೂಕಿನ ಕುದುರಿ ಮೋತಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಪರಿದಾಬೇಗಂ ಹುಸೇನಸಾಬ್ ತಂಬಾಕುದಾರ ಅವರನ್ನು ದಹಲಿಯ ಕೆಂಪುಕೋಟೆಯಲ್ಲಿ ನಡೆಯುವ ಪ್ರಸಕ್ತ ಸಾಲಿನ ಸ್ವಾತಂತ್ರ್ಯ ದಿನಾಚರಣೆಯ

ಕಾರ್ಯಕ್ರಮಕ್ಕೆ ಆಹ್ವಾನಿತರನ್ನಾಗಿ ಕೇಂದ್ರ ಸರ್ಕಾರ ಆಮಂತ್ರಿಸಿದೆ. ಈ ಸಂದರ್ಭದಲ್ಲಿ ಪರಿದಾಬೇಗಂ ಮಾಧ್ಯಮದೊಂದಿಗೆ ಮಾತನಾಡಿ, ತಮಗೆ ನೀಡಿದ ಆಹ್ವಾನ ಅಧಿಕಾರ ವಿಕೇಂದ್ರೀಕರಣಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ವಿಜಯಪುರದಲ್ಲಿಂದು ಐತಿಹಾಸಿಕ ಗೋಲಗುಮ್ಮಟದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಹರ್ ಘರ್ ತಿರಂಗಾ ಅಂಗವಾಗಿ ಸೈಕಲ್ ರ್‍ಯಾಲಿ ಹಾಗೂ ಜನಯಾತ್ರೆ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸ್ವಾತಂತ್ರ್ಯೋತ್ಸವದ ಅಂಗವಾಗಿ ಧಾರವಾಡದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಕರ್ನಾಟಕ ೨೪ ಎನ್‌ಸಿಸಿ ಬಟಾಲಿಯನ್ ಲೆಫ್ಟಿನೆಂಟ್ ಕರ್ನಲ್ ಸುಸಾನ್ ರಾಯ್ ಮಾತನಾಡಿ, ರಾಷ್ಟ್ರದ ಅಭಿವೃದ್ಧಿಗೆ ಐಕ್ಯತೆ ಮತ್ತು ಸೌಹಾರ್ದತೆ ಕಾಪಾಡುವಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದರು. ಇದೇ ಸಂದರ್ಭದಲ್ಲಿ ಕೆಲಗೇರಿ ಕೆರೆ ಆವರಣದಿಂದ ಕರ್ನಾಟಕ ಕಾಲೇಜುವರೆಗೆ ಆಯೋಜಿಸಲಾಗಿದ್ದ ಐಕ್ಯತೆಗಾಗಿ ಓಟದಲ್ಲಿ ವಿಜೇತರಾದ ಎನ್‌ಸಿಸಿ ಕೆಡೆಟ್‌ಗಳಿಗೆ ಪ್ರಶಸ್ತಿ ವಿತರಿಸಿದರು. ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆಯೋಜಿಸಲಾಗಿರುವ ಹರ್ ಘರ್ ತಿರಂಗಾ ಅಭಿಯಾನ ಕೊಡಗು ಜಿಲ್ಲೆಯಲ್ಲಿ ಚಾಲನೆ ನೀಡಲಾಯಿತು. ಮಡಿಕೇರಿಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹರ್ ಘರ್ ತಿರಂಗಾ ವೈವಿಧ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಬಾಗಲಕೋಟೆ ಜಿಲ್ಲೆಯಲ್ಲಿ ಆಜಾದಿ ಕಾ ಅಮೃತ್ ಮಹೋತ್ಸವದ ಅಡಿಯಲ್ಲಿ ಹರ್ ಘರ್ ತಿರಂಗ ಅಭಿಯಾನ ನಾಳೆ ಆರಂಭವಾಗಲಿದೆ. ಮೂರು ದಿನಗಳ ಕಾಲ ನಡೆಯುವ ಈ ಅಭಿಯಾನದಲ್ಲಿ ಎಲ್ಲರೂ ಪಾಲ್ಗೊಳ್ಳುವಂತೆ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಕೋರಿದ್ದಾರೆ.

<><><><>

ಉತ್ತರಕನ್ನಡ ಜಿಲ್ಲೆಯ ಹಳಿಯಾಳ, ಜೊಯಿಡಾ ಹಾಗೂ ಭಟ್ಕಳದ ೩೧ ಗ್ರಾಮಗಳು ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರದ ಸಚಿವಾಲಯದ ಧರ್ತಿ ಅಬಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ಹೋಂಸ್ಟೇ ನಿರ್ಮಾಣಕ್ಕೆ ಹಾಗೂ ನವೀಕರಣಕ್ಕಾಗಿ ಸಹಾಯಧನ ಪಡೆಯಲು ಆಯ್ಕೆಯಾಗಿವೆ. ಯೋಜನೆಯ ಬಗ್ಗೆ ಪ್ರದೇಶ ಸಮಾಚಾರದೊಂದಿಗೆ ಉತ್ತರಕನ್ನಡ ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಮಂಜುನಾಥ ನಾವಿ, ಮಾಹಿತಿ ಹಂಚಿಕೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>